# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ವಿ.ಸಿ.ಹನುಮಂತಪ್ಪ, ತಾಂತ್ರಿಕ ಸಹಾಯಕರು ಹಾಗೂ ಅವರ ಪತ್ನಿಯ ವೈದ್ಯಕೀಯ ವೆಚ್ಚ ಮರುಪಾವತಿ ಬಗ್ಗೆ.

**ಓದಲಾಗಿದೆ.**

1. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ. ಮುಇಂ /ಪಂರಾಇಂಇ/ಬೆಂ/ಸಿ-10/2011-12, ದಿನಾಂಕ. 01-08-2011.
2. ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಪತ್ರ ಸಂಖ್ಯೆ. ಎಂಡಿಎ(ಬೆಂ)/1046/2011-12, ದಿನಾಂಕ. 14-10-2011.

**ಪ್ರಸ್ತಾವನೆ:**

ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರು ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ದಿನಾಂಕ. 01-08-2011ರ ಪತ್ರದಲ್ಲಿ ಶ್ರೀ ವಿ.ಸಿ.ಹನುಮಂತಪ್ಪ, ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ದಾವಣಗೆರೆ ಇವರು ಹಾಗೂ ಇವರ ಪತ್ನಿಯು ದಿನಾಂಕ. 6-10-2010 ರಿಂದ 16-01-2011 ರವರೆಗೆ ಮಣಿಪಾಲ್ ಆಸ್ಪತ್ರೆ, ಬೆಂಗಳೂರು, ಕಸ್ತೂರಿ ಬಾ ಆಸ್ಪತ್ರೆ, ಮಣಿಪಾಲ್ ಇಲ್ಲಿ ಅನುಕ್ರಮವಾಗಿ Ufer Uretaric Calculus and Gastro Parasio Metobolic Syndrom ಎಂಬ ಕಾಯಿಲೆಗೆ ಚಿಕಿತ್ಸೆಯನ್ನು ಪಡೆದಿದ್ದು, ಅದರ ವೆಚ್ಚ ರೂ. 6,58,091-00 ಗಳಾಗಿದೆಯೆಂದು ಸದರಿ ಮೊತ್ತವನ್ನು ಮರುಪಾವತಿ ಮಾಡುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಪತ್ರದಲ್ಲಿ ರೂ. 2,47,525-00 ಗಳನ್ನು ಮರುಪಾವತಿಸಲು ಶಿಫಾರಸ್ಸು ಮಾಡಿರುತ್ತಾರೆ.

ಆದುದರಿಂದ, ಸರ್ಕಾರವು ಶ್ರೀ ವಿ.ಸಿ.ಹನುಮಂತಪ್ಪ ಮತ್ತು ಅವರ ಪತ್ನಿ ಶ್ರೀಮತಿ ಎಂ.ಬಿ.ಭಾರತಿ ಇವರು ಪಡೆದಿರುವ ವೈದ್ಯಕೀಯ ವೆಚ್ಚವನ್ನು ಈ ಕೆಳಕಂಡಂತೆ ಮರುಪಾವತಿಸಲು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ:-

| ಕ್ರ.ಸಂ. | ಅಧಿಕಾರಿ / ನೌಕರರ ಹೆಸರುಗಳು | ಸಂಬಂಧಪಟ್ಟ ನೌಕರರು ಹಾಗೂ ರೋಗಿಗೆ ಇವರು ಸಂಬಂಧ | ಅರ್ಹತಾ ಮೊತ್ತ (ರೂ.ಗಳಲ್ಲಿ) |
|---|---|---|---|
| 1. | ಶ್ರೀ ವಿ.ಸಿ.ಹನುಮಂತಪ್ಪ | ಪತ್ನಿ | 15,001-00<br>1,72,189-00 |
| 2. | ಶ್ರೀ ವಿ.ಸಿ.ಹನುಮಂತಪ್ಪ | ಸ್ವಂತ | 19,620-00 |
| 3. | ಶ್ರೀ ವಿ.ಸಿ.ಹನುಮಂತಪ್ಪ | ಪತ್ನಿ | 40,715-00 |
| | | ಒಟ್ಟು: | ***2,47,525-00*** |

----2

**ಆದೇಶ ಸಂಖ್ಯೆ. ಗ್ರಾಅಪ 238 ಜಿಪಅ 2011, ಬೆಂಗಳೂರು,**
**ದಿನಾಂಕ. 15-09-2012.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರಿ ನೌಕರರು (ವೈದ್ಯಕೀಯ ಹಾಜರಾತಿ) ನಿಯಮಗಳು 1963ರನ್ವಯ ಶ್ರೀ ವಿ.ಸಿ.ಹನುಮಂತಪ್ಪ, ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ದಾವಣಗೆರೆ ಇವರು ಮತ್ತು ಇವರ ಪತ್ನಿ ಶ್ರೀಮತಿ ಎಂ.ಬಿ.ಭಾರತಿ ಇವರು ಮಣಿಪಾಲ್ ಆಸ್ಪತ್ರೆ, ಬೆಂಗಳೂರು, ಕಸ್ತೂರಿ ಬಾ ಆಸ್ಪತ್ರೆ, ಮಣಿಪಾಲ್ ಇಲ್ಲಿ ಪಡೆದಿರುವ ವೈದ್ಯಕೀಯ ಚಿಕಿತ್ಸಾ ವೆಚ್ಚ ರೂ. 2,47,525-00/- (ರೂಪಾಯಿ ಎರಡು ಲಕ್ಷ ನಾಲ್ವತ್ತೇಳು ಸಾವಿರದ ಐನ್ನೂರ ಇಪ್ಪತ್ತೈದು ಮಾತ್ರ) ಗಳನ್ನು ಮರುಪಾವತಿಸಲು ಮಂಜೂರಾತಿ ನೀಡಿದೆ.

ಈ ಆದೇಶವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-2)ಯ ಟಿಪ್ಪಣಿ ಸಂಖ್ಯೆ. ಸಿ ಆಸುಇ 30 ಸೇನಿಎಫ್ 2012, ದಿನಾಂಕ. 24-08-2012 ಹಾಗೂ ಆರ್ಥಿಕ ಇಲಾಖೆಯು ದಿನಾಂಕ. 4-9-2012ರಂದು ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ವೈ.ಸಾಗರ), 15/9/2012
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ;

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ / ಆರ್ಥಿಕ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು – ಮೂಲ ವೈದ್ಯಕೀಯ ವೆಚ್ಚದ ಬಿಲ್ಲುಗಳನ್ನು ಇದರೊಂದಿಗೆ ಲಗತ್ತಿಸಿದೆ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ
5. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ದಾವಣಗೆರೆ.
6. ಶ್ರೀ ವಿ.ಸಿ.ಹನುಮಂತಪ್ಪ, ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ದಾವಣಗೆರೆ.
7. ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-2), ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸೇವೆಗಳು), ವಿಧಾನ ಸೌಧ, ಬೆಂಗಳೂರು.
9. ಗ್ರಾ.ಅ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ (ಆಡಳಿತ-1) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
10. ಹೆಚ್ಚುವರಿ ಪ್ರತಿ/ರಕ್ಷಾ ಕಡತ/ಕಂಪ್ಯೂಟರ್ ಸೆಲ್.